# ಕಾನೂನು ಇಲಾಖೆ

ನಗರಪಾಲಿಕೆ ನ್ಯಾಯವಾದಿಗಳಿಗೆ ವಹಿಸಿರುವ ದಾವೆಗಳ ಬಗ್ಗೆ ವಕಾಲತ್ತು ಕಳುಹಿಸುವುದು ಹಾಗೂ ಅವರಿಗೆ ಅವಶ್ಯಕವಾದ ಮಾಹಿತಿಯನ್ನು ಒದಗಿಸುವ ಕೆಲಸಗಳನ್ನು ಕಿರಿಯ ಕಾನೂನು ಅಧಿಕಾರಿಗಳಿಗೆ ವಹಿಸಲಾಗಿದೆ. ಮಹಾನಗರ ಪಾಲಿಕೆ ವಿರುದ್ಧ ದಾಖಲು ಮಾಡಿದ ಪ್ರಕರಣಗಳಲ್ಲಿ ತಕರಾರುಗಳನ್ನು ತಯಾರಿಸುವ ನಿಟ್ಟಿನಲ್ಲಿ ವಿಶೇಷ ಗಮನವನ್ನು ಹರಿಸಲಾಗಿದೆ. ಪಾಲಿಕೆಗೆ ಸಂಬಂಧಿಸಿದ ಆಸ್ತಿ ಪ್ರಕರಣಗಳಲ್ಲಿ ವಿಶೇಷ ಗಮನವನ್ನು ಹರಿಸಿ ಸಂಬಂಧಪಟ್ಟ ಇಲಾಖೆಗಳನ್ನು ಸಂಪರ್ಕಿಸಿ ಸಂಪೂರ್ಣ ಮಾಹಿತಿಯನ್ನು ಒದಗಿಸುವುದರಲ್ಲಿ ವಿಶೇಷ ಕಾಳಜಿ ವಹಿಸಲಾಗುತ್ತಿದೆ. ಸಹಾಯಕ ಕಾನೂನು ಅಧಿಕಾರಿಗಳು ತಮಗೆ ಸಂಬಂಧಿಸಿದ ವಲಯಗಳಿಗೆ ಕಾನೂನಿನ ಬಗ್ಗೆ ಅಭಿಪ್ರಾಯಗಳನ್ನು ಕೊಡುತ್ತಾರೆ. ಉಪ ಕಾನೂನು ಅಧಿಕಾರಿಯನ್ನು ಹಕ್ಕು ಮಾಹಿತಿ ಕಾಯಿದೆ 2005 ಅಡಿ ಸಾರ್ವಜನಿಕ ಮಾಹಿತಿ ಅಧಿಕಾರಿಯೆಂದು ನೇಮಕ ಮಾಡಲಾಗಿದೆ. ಕಾನೂನು ಕೋಶದ ಮುಖ್ಯಸ್ಥರು ಮುಖ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಉಪಯುಕ್ತವಾದ ಸಲಹೆ ಸೂಚನೆಗಳನ್ನು ಸಂಬಂಧಪಟ್ಟ ಇಲಾಖೆಗಳಿಗೆ ಕೊಡುವುದಲ್ಲದೆ ಮಾನ್ಯ ಉಚ್ಚ ನ್ಯಾಯಾಲಯದ ಆದೇಶಗಳನ್ನು ಪಾಲಿಸುವುದರಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆಗಳನ್ನು ಕರ್ನಾಟಕ ರಾಜ್ಯ ಕೊಡುತ್ತಾರೆ. ಮಾನವ ಹಕ್ಕು ಆಯೋಗದವರು ನಿರ್ದೇಶಿಸಿದ ಪ್ರಕರಣಗಳನ್ನು ಕೂಡ ನಿರ್ವಹಿಸುತ್ತಾರೆ.

ನಗರಪಾಲಿಕೆಯ ವಿರುದ್ಧ ದಾಖಲಾಗುವ ಪ್ರಕರಣಗಳಲ್ಲಿ ಕಂಡಿಕೆವಾರು ಉತ್ತರಗಳನ್ನು ಸಂಬಂಧಪಟ್ಟ ಇಲಾಖೆಯವರೇ ಒದಗಿಸಬೇಕಾಗುತ್ತದೆ. ಅವರಿಗೆ ಕಂಡಿಕೆವಾರು ಉತ್ತರಗಳನ್ನು ತಯಾರಿಸುವಲ್ಲಿ ಸಲಹೆ ಸೂಚನೆ ನೀಡಲು ಶ್ರೀ ಕೆ.ಎಂ. ಕದೀಮ್ ದಿವಾನ್, ಹಿರಿಯ ವಕೀಲರನ್ನು ಮಾಹೆ ವೇತನದ ಮೇಲೆ ನೇಮಿಸಿಕೊಳ್ಳಲಾಗಿದೆ.

ಪ್ರಸಕ್ತ ಸಾಲಿನಲ್ಲಿ ಮಹಾನಗರ ಪಾಲಿಕೆ ಪರವಾಗಿ ಹಾಜರಾಗಲು 42 ಜನ ವಕೀಲರು ಕಾರ್ಯ ನಿರ್ವಹಿಸುತ್ತಿದ್ದಾರೆ. ಇಬ್ಬರು ವಕೀಲರು ಮಹಾನಗರ ಪಾಲಿಕೆ ಪರವಾಗಿ ಮಾಹಿತಿ ಹಕ್ಕು ಆಯೋಗದ ಸಮಕ್ಷಮ ಹಾಜರಾಗಲು ನೇಮಕವಾಗಿರುತ್ತಾರೆ. ಇದಲ್ಲದೇ ಇಬ್ಬರು ವಕೀಲರನ್ನು ಓತ್ ಕಮೀಷನರ್ ಹಾಗೂ ಜನನ ಮರಣ ಕಾಯೆ ಪ್ರಕರಣಗಳಿಗೆ ಹಾಜರಾಗಲು ನೇಮಕ ಮಾಡಲಾಗಿದೆ.

ಬೆಂಗಳೂರು ಮಹಾನಗರ ಪಾಲಿಕೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಾದುದರಿಂದ ಹೊಸ ವಲಯದ ಪ್ರಕರಣಗಳ ಬಗ್ಗೆ ವಿಶೇಷ ಗಮನಹರಿಸಲಾಗುವುದು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಸ್ತಿಗೆ ಸಂಬಂಧಪಟ್ಟ ಪ್ರಕರಣಗಳಲ್ಲಿ ವಿಶೇಷ ಗಮನವನ್ನು ಹರಿಸಿ ಪ್ರಕರಣಕ್ಕೆ ಬೇಕಾದ ಎಲ್ಲಾ ರೀತಿಯ ದಾಖಲೆಗಳನ್ನು ಒದಗಿಸಿ ಆಸ್ತಿಯನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಗಮನಹರಿಸಲಾಗುವುದು. ಕೆ.ಎ.ಟಿ. ಪ್ರಕರಣಗಳ ಬಗ್ಗೆ ವಿಶೇಷ ಕಾಳಜಿ ವಹಿಸಲಾಗುವುದು.